ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಸರ್ಕಾರದ ಗಮನಕ್ಕೆ ಬಂದಿದೆ ;

ಮುಖ್ಯ ಜಾಗೃತಾಧಿಕಾರಿಗಳು, ಜಾಗೃತಕೋಶ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು. ಇವರು ಅರಸೀಕೆರೆ ತಾಲ್ಲೂಕು ಕೆಂಕೆರೆ ಆಸ್ಪತ್ರೆಯಲ್ಲಿನ ಹಣ ದುರುಪಯೋಗವಾಗಿರುವ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸಿದ್ದು. ತನಿಖಾ ವರದಿಯಲ್ಲಿ ತಿಳಿಸಿರುವ ಅಂಶಗಳ ಬಗ್ಗೆ ಹಾಗೂ ಸಂಬಂಧಿಸಿದ ಆರೋಪಿತ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸುವ ಕುರಿತಂತೆ ವಿಚಾರಣಾ ಪ್ರಕ್ರಿಯೆ ಚಾಲ್ತಿಯಲ್ಲಿ ಇರುತ್ತದೆ.

ಆಸ್ಪತ್ರೆಗಳನ್ನು ಪುನರಂಭಿಸುವುದು

227 (891) ಶ್ರೀ ಗೋಪಾಲ ಭಂಡಾರಿ. ಹೆಚ್ (ಕಾರ್ಕಳ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಉಡುಪಿ ಜಿಲ್ಲೆಯಿಂದ 5 ಆಸ್ಪತ್ರೆಗಳನ್ನು ಬಳ್ಳಾರಿಗೆ ಸ್ಥಳಾಂತರ ಮಾಡಿರುವುದನ್ನು ಪುನಃ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು;

(ಇ) ಯಾವ ದಿನಾಂಕದಿಂದ ಪ್ರಾರಂಭಿಸಲಾಗುವುದು ?

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಸರ್ಕಾರದ ಆದೇಶ ಸಂಖ್ಯೆ: ಆಕುಕ/443/ ಸಿಜಿಎಂ/2007, ದಿನಾಂಕ: 04–10–2007 ರಲ್ಲಿ, ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಮುನಿಯಾಲು, ಉಡುಪಿ ತಾಲ್ಲೂಕಿನ ಕರ್ಜೆ, ಪೆರುಡೂರು ಮತ್ತು ವಡ್ಡರ್ಸೆ ಹಾಗೂ ಕುಂದಾಪುರ ತಾಲೂಕಿನ ಹಟ್ಟಿಯಂಗಡಿ ಈ 5 ಗ್ರಾಮಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೆಲವು ಷರತ್ತುಗಳಿಗೆ ಒಳಪಟ್ಟು ಮಂಜೂರು ಮಾಡಲಾಗಿತ್ತು. ಸರ್ಕಾರವು ವಿಧಿಸಿದ್ದ ಷರತ್ತುಗಳನ್ನು ಉಡುಪಿ ತಾಲ್ಲೂಕಿನ ಕರ್ಜೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಂಬಂಧಿಸಿದಂತೆ ಮಾತ್ರ ಪೂರೈಸಿದ್ದ ಕಾರಣ, ಸದರಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ದಿನಾಂಕ: 2–6–2009 ರಂದು ಅನುಮತಿ ನೀಡಿದೆ. ಉಳಿದ 4 ಗ್ರಾಮಗಳಿಗೆ

ಸಂಬಂಧಿಸಿದಂತೆ, ಷರತ್ತುಗಳನ್ನು ಪೂರೈಸದೇ ಇದ್ದ ಕಾರಣ, ಸರ್ಕಾರಿ ಆದೇಶ ಸಂಖ್ಯೆ: ಆಕುಕ/626/ಸಿಜಿಎಂ/2008 ದಿನಾಂಕ: 21–08–2010ರಲ್ಲಿ ಸದರಿ ಮಂಜೂರಾತಿಯನ್ನು ರದ್ದುಪಡಿಸಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ

208 (722) ಶ್ರೀ ಚಿಕ್ಕನಗೌಡ್ರ ಸಿದ್ದನಗೌಡ ಈಶ್ವರಗೌಡ (ಕುಂದಗೋಳ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಧಾರವಾಡ ಜಿಲ್ಲೆಯ ಕುಂದಗೋಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ಎರಡು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯಾರಂಭ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಟ್ಟಡವನ್ನು ಕಟ್ಟಲು ಅನುದಾನ ಬಿಡುಗಡೆ ಮಾಡಿದಿರಲು ಕಾರಣಗಳೇನು;

(ಇ) ಈ ಸಾಲಿನಲ್ಲಾದರೂ ಅನುದಾನ ಬಿಡುಗಡೆ ಮಾಡಲಾಗುವುದೇ;

(ಈ) ಹಾಗಿದ್ದಲ್ಲಿ, ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಧಾರವಾಡ ಜಿಲ್ಲೆ, ಕುಂದಗೋಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ 2 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಂದರೆ, ಅದರಗುಂಚಿ ಮತ್ತು ಕಮ್ಮಡಹಳ್ಳಿ ಗ್ರಾಮಗಳಿಗೆ ಸರ್ಕಾರವು ಕೆಲವು ಷರತ್ತುಗಳನ್ನು ವಿಧಿಸಿ ಮಂಜೂರು ಮಾಡಿತ್ತು, ನಿಗದಿತ ಸಮಯದಲ್ಲಿ ಷರತ್ತುಗಳನ್ನು ಪೂರೈಸಿದ್ದ ಕಾರಣ, ಅದರಗುಂಚಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ದಿನಾಂಕ: 18–04–2012 ರಂದು ಅನುಮತಿ ನೀಡಿದೆ. ಮುಂದುವರೆದು, ಕಮ್ಮಡಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಂಬಂಧಿಸಿದಂತೆ, ಷರತ್ತುಗಳನ್ನು ಪೂರೈಸಿರುವುದಿಲ್ಲ.